( ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು )
ದಿಃ 17/10/2019
ಅಸಲು ದಾವೆ.ನಂ. 65/2018
( ಮುಖ್ಯ ವಿಚಾರಣೆಃ ಶ್ರೀ ಎ.ಬಿ.ಆರ್. ವಕೀಲರಿಂದ )

ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಅದರಲ್ಲಿ ಇರುವ ವಿಷಯಗಳನ್ನು ನಾನೇ ಹೇಳಿ ಬರೆಸಿದ್ದೇನೆ, ಸಹಿಗಳು ನನ್ನದೆ ಇದೆ.

ನಮ್ಮ ಕುಟುಂಬಕ್ಕೆ ಸೇರಿದ ವಂಶವೃಕ್ಷವನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಈ-ಸ್ವತ್ತು ಖಾತೆಯನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಈ-ಸ್ವತ್ತು ಖಾತೆ ಕೋರಿ ನೀಡಿದ ಅರ್ಜಿಯ ಹಿಂಬರಹವನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ದಿಃ19-01-2016 ರಂದು ಕಟ್ಟೇಪುರ ಗ್ರಾಮದ ಪಂಚಾಯಿತಿಯ ಪಿ.ಡಿ.ಓ.ರವರಿಗೆ ಹಿತ್ತಲು ಜಾಗದ ಖಾತೆಯನ್ನು ನನ್ನ ಅಣ್ಣ ಕೆ. ನಂಜೇಗೌಡರಿಗೆ ಮಾಡಿಕೊಡದಂತೆ ನೀಡಿದ ತಕರಾರು ಅರ್ಜಿಯ ಪ್ರತಿಯನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಬಂಡಿಪಾಳ್ಯ ಗ್ರಾಮದ ಸ.ನಂಃ 45/1 ಕ್ಕೆ ಸಂಬಂಧಿಸಿದಂತೆ ಒಂದು ಗಣಕೀಕೃತ ಪಹಣಿಯನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ವಾದಿಯರ ಪರ ವಕೀಲರು ಸಮಯಾವಕಾಶವನ್ನು ಕೋರಿದ್ದರಿಂದ ಅನುಮತಿಸಲಾಯಿತು.

( ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )
ಓ.ಹೇ.ಕೇ.ಸ.ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,
ಜೆ.ಎಂ.ಎಫ್.ಸಿ,ಅರಕಲಗೂಡು.